# ಬಾಲ್ಯ ವಿವಾಹ ನಿಷೇಧ

## ಮಾಹಿತಿಪತ್ರ

DIGNITY • EQUALITY
Spandana

## ಬಾಲ್ಯ ವಿವಾಹ ಶಿಕ್ಷಾರ್ಹ ಅಪರಾಧ
## ಬಾಲ್ಯ ವಿವಾಹ ತಡೆಗಟ್ಟಿ ಮಕ್ಕಳ ಬಾಳನ್ನು ಬೆಳಗಿಸಿ

21 ವರ್ಷ ಒಳಗಿನ ಹುಡುಗ ಹಾಗೂ 18 ವರ್ಷದ ಒಳಗಿನ ಹುಡುಗಿಯರ ನಡುವೆ ಅಥವಾ ಇಬ್ಬರಲ್ಲಿ ಒಬ್ಬರು ನಿಗಧಿತ ವಯಸ್ಸಿನೊಳಗಿದ್ದರೂ ಇಂತಹ ಮದುವೆಯನ್ನು ಬಾಲ್ಯ ವಿವಾಹ ಎಂದು ಪರಿಗಣಿಸಲಾಗುವುದು.

**ಬಾಲ್ಯ ವಿವಾಹಕ್ಕೆ ಕಾರಣಗಳು :**

1. ಬಡತನ 2. ಅನಕ್ಷರತೆ 3. ಮೂಢನಂಬಿಕೆಗಳು 4. ಬಾಲ್ಯ ವಿವಾಹದ ದುಷ್ಪರಿಣಾಮದ ಅರಿವು ಇಲ್ಲದೆ ಇರುವುದು 5. ಶೈಕ್ಷಣಿಕ ಸೌಲಭ್ಯವನ್ನು ಉಳಿಸಿಕೊಳ್ಳುವುದು 6. ರಕ್ತಸಂಬಂಧವನ್ನು ಉಳಿಸಿಕೊಳ್ಳುವುದು 7. ಕುಟುಂಬದ ಆಸ್ತಿಯನ್ನು ಕುಟುಂಬಸ್ಥರಲ್ಲೇ ಉಳಿಸಿಕೊಳ್ಳುವುದು 8. ಹೆತ್ತವರು ಹಾಗೂ ಪಾಲಕರು ತಮ್ಮ ಜವಾಬ್ದಾರಿಯನ್ನು ಕಳೆದುಕೊಳ್ಳುವುದು. 9. ಸಾಮೂಹಿಕ ವಿವಾಹದಲ್ಲಿ ಕಡಿಮೆ ಖರ್ಚಾಗುತ್ತದೆಂಬ ಭಾವನೆ 10. ದೊಡ್ಡ ಮಗ/ಮಗಳ ಮದುವೆಯೊಂದಿಗೆ ವಿವಾಹ ಮಾಡಿದಲ್ಲಿ ಕಡಿಮೆ ಖರ್ಚಾಗುತ್ತದೆಂಬ ಭಾವನೆ 11. ವೃದ್ಧರ ಹಾಗೂ ಅನಾರೋಗ್ಯದ ಹಿರಿಯರ ಆಸೆ ಈಡೇರಿಸುವ ಉದ್ದೇಶದಿಂದ 12. ಮದುವೆ ಮಾಡಿದ ಹೆಣ್ಣು ಮಗುವನ್ನು ಸಾಮಾಜಿಕವಾಗಿ ರಕ್ಷಿಸಬಹುದೆಂಬ ಭಾವನೆ 13. ಎಳೆ ವಯಸ್ಸಿನಲ್ಲಿ ಮಗಳಿಗೆ ಮದುವೆ ಮಾಡಿದರೆ ವರದಕ್ಷಿಣೆ ಕಡಿಮೆಯಾಗುತ್ತದೆಂಬ ಕಾರಣ

**ಬಾಲ್ಯ ವಿವಾಹದಿಂದಾಗುವ ದುಷ್ಪರಿಣಾಮಗಳು :**

ಮಕ್ಕಳ ಸಾಮಾಜಿಕ ಮತ್ತು ಆರ್ಥಿಕ ಪರಿಸ್ಥಿತಿಯನ್ನು ಲೆಕ್ಕಿಸದೆ ಎಲ್ಲಾ ಮಕ್ಕಳಿಗೆ ಆರೈಕೆ ಮತ್ತು ಸುರಕ್ಷೆ – ಒಬ್ಬ ಪರಿಪೂರ್ಣ ಹಾಗೂ ಸಮಗ್ರ ವ್ಯಕ್ತಿಯಾಗಿ ಬೆಳೆಯುವ ಹಕ್ಕು ಇದೆ. ಬಾಲ್ಯ ವಿವಾಹ ಈ ಎಲ್ಲಾ ಹಕ್ಕುಗಳನ್ನು ಅಸಹನೀಯವಾಗಿ ಉಲ್ಲಂಘಿಸುತ್ತದೆ.

**ದೈಹಿಕ ಮತ್ತು ಆರೋಗ್ಯದ ಮೇಲೆ ಬೀರುವ ದುಷ್ಪರಿಣಾಮಗಳು :**

1. ವಯಸ್ಸಿಗೆ ಮೀರಿದ ಜವಾಬ್ದಾರಿ ಹೊರಿಸಿದಂತಾಗುತ್ತದೆ.
2. ಅಪ್ರಾಪ್ತ ವಯಸ್ಸಿನಲ್ಲಿ ಗರ್ಭಿಣಿಯಾಗುವುದರಿಂದ ಬೆಳವಣಿಗೆ ಪೂರ್ಣಗೊಳ್ಳದೆ ಹೆರಿಗೆ ಸಮಯದಲ್ಲಿ ಅಕಾಲಿಕ ಮರಣಕ್ಕೆ ತುತ್ತಾಗುವ ಸಾಧ್ಯತೆಯಿರುತ್ತದೆ.
3. ವಿಕಲಾಂಗ ಮಕ್ಕಳ ಜನನವುಂಟಾಗುತ್ತದೆ.
4. ಮಕ್ಕಳು ಲೈಂಗಿಕ ದೌರ್ಜನ್ಯಕ್ಕೆ ಹಾಗೂ ಬಲಾತ್ಕಾರಕ್ಕೆ ಒಳಗಾಗುತ್ತಾರೆ.
5. ಲೈಂಗಿಕ ಖಾಯಿಲೆಗಳಿಂದ ಹೆಚ್. ಐ. ವಿ. / ಏಡ್ಸ್‌ಗೆ ಗುರಿಯಾಗುವ ಸಾಧ್ಯತೆ ಇರುತ್ತದೆ.
6. ರಕ್ತ ಹೀನತೆ ಉಂಟಾಗುತ್ತದೆ ಹಾಗೂ ಕಡಿಮೆ ತೂಕದ ಮಗುವಿನ ಜನನದ ಸಾಧ್ಯತೆ ಇರುತ್ತದೆ.
7. ಶಿಶು ಮರಣ ಹಾಗೂ ಮಕ್ಕಳ ಮರಣ ಹೆಚ್ಚಾಗುತ್ತದೆ.
8. ದೈಹಿಕ ಬೆಳವಣಿಗೆ ಕುಂಠಿತವಾಗುತ್ತದೆ.
9. ಗರ್ಭಪಾತ ಹೆಚ್ಚಾಗುತ್ತದೆ.
10. ಗರ್ಭ ಚೀಲಕ್ಕೆ ಪೆಟ್ಟು ಬೀಳುತ್ತದೆ.

**ಮಾನಸಿಕ ದುಷ್ಪರಿಣಾಮಗಳು :**

1. ಬಾಲ್ಯ ವಿವಾಹಕ್ಕೆ ಒಳಗಾದ ಮಕ್ಕಳು ಮಾನಸಿಕ ದೌರ್ಬಲ್ಯತೆಗೆ ಒಳಗಾಗುತ್ತಾರೆ. 2. ಖಿನ್ನತೆ ಕಂಡು ಬರುತ್ತದೆ. 3. ಭಯಭೀತ ವಾತಾವರಣ ಕಲ್ಪಿಸಿದಂತಾಗುತ್ತದೆ. 4. ಮಾನಸಿಕ ಸ್ಥೈರ್ಯ ಕಳೆದುಕೊಳ್ಳುವುದು.

**ಸಾಮಾಜಿಕ ದುಷ್ಪರಿಣಾಮಗಳು :**

1. ಶಿಕ್ಷಣದಿಂದ ವಂಚಿತರಾಗಿ ಅನಕ್ಷರತೆ ಹೆಚ್ಚಾಗುವುದು. 2. ಶಾಲೆ ಬಿಡುವ ಮಕ್ಕಳ ಸಂಖ್ಯೆ ಹೆಚ್ಚಾಗುತ್ತದೆ. 3. ಬಾಲ್ಯಾವಸ್ಥೆ ಬಾಲ್ಯಾವಕಾಶದಿಂದ ವಂಚಿತರಾಗುವುದು. 4. ತಾರತಮ್ಯ ಮತ್ತು ಅವಹೇಳನಕ್ಕೆ ಬಲಿಯಾಗುವುದು 5. ಅವಮಾನ ಎದುರಿಸಲಾಗದೆ ಅಜ್ಞಾನದಿಂದ ಆತ್ಮಹತ್ಯೆ ಮಾಡಿಕೊಳ್ಳುವುದು. 6. ಎಳೆಯ ವಯಸ್ಸಿನಲ್ಲೇ ವಿಧವೆಯಾಗುವುದು 7. ವಿಧವೆಯರ ಸಂಖ್ಯೆ ಹೆಚ್ಚಾಗುವುದು. 8. ವಯಸ್ಸಿನ ಅಂತರದ ಹೆಚ್ಚಳದಿಂದ ದಂಪತಿಗಳಲ್ಲಿ ಸಾಮರಸ್ಯ ಇಲ್ಲದೆ ಇರುವುದು. 9. ನಿರಂತರ ಕೌಟುಂಬಿಕ ದೌರ್ಜನ್ಯ ನಿಂದನೆಗೆ ಒಳಗಾಗುವುದು. 10. ದೇಶದ ಅಭಿವೃದ್ಧಿ ಕುಂಠಿತವಾಗುತ್ತದೆ.

## ಬಾಲ್ಯ ವಿವಾಹ ನಿಷೇಧ ಕಾಯ್ದೆ 2006 ಮತ್ತು ನಿಯಮಾವಳಿಗಳು 2008 ರ ಅನುಷ್ಠಾನ

ಈ ಕಾಯ್ದೆಯು ಜಮ್ಮು-ಕಾಶ್ಮೀರ ಮತ್ತು ಪಾಂಡಿಚೇರಿ ಹೊರತು ಪಡಿಸಿ ಭಾರತದ ಎಲ್ಲಾ ನಾಗರೀಕರಿಗೆ ಅನ್ವಯಿಸುತ್ತದೆ.

ಈ ಕಾಯ್ದೆಯಡಿ ಬಾಲ್ಯ ವಿವಾಹವು ಜಾಮೀನು ರಹಿತ ಹಾಗೂ ವಿಚಾರಣಾರ್ಹ ಅಪರಾಧವಾಗಿರುತ್ತದೆ.

## ಬಾಲ್ಯ ವಿವಾಹದಲ್ಲಿ ಈ ಕೆಳಗಿನವರು ತಪ್ಪಿತಸ್ಥರಾಗಿರುತ್ತಾರೆ.

1. ಮಕ್ಕಳನ್ನು ಮದುವೆಯಾಗುವ ಯಾವುದೇ ವಯಸ್ಕ ವ್ಯಕ್ತಿ
2. ಬಾಲ್ಯ ವಿವಾಹವನ್ನು ಏರ್ಪಡಿಸುವ, ನಿರ್ದೇಶಿಸುವ, ನೆರವೇರಿಸುವ ಮತ್ತು ಕುಮ್ಮಕ್ಕು ನೀಡುವ ಯಾವುದೇ ವ್ಯಕ್ತಿ / ಸಂಸ್ಥೆ
3. ಮಗುವನ್ನು ಹೆತ್ತವರು / ಪೋಷಕರು / ಸಂರಕ್ಷಕರು
4. ಮಗುವಿನ ಜವಾಬ್ದಾರಿಯನ್ನು ಹೊತ್ತ ಯಾವುದೇ ವ್ಯಕ್ತಿ / ಸಂಸ್ಥೆಯ ನಿರ್ಲಕ್ಷ್ಯತೆಯಿಂದ ಬಾಲ್ಯ ವಿವಾಹವನ್ನು ತಡೆಯಲು ವಿಫಲರಾದವರು.
5. ಬಾಲ್ಯ ವಿವಾಹದಲ್ಲಿ ಭಾಗವಹಿಸಿದವರು
6. ಕಾಯ್ದೆಯಡಿ ನೀಡಿದ ತಡೆಯಾಜ್ಞೆಯನ್ನು ಉಲ್ಲಂಘಿಸಿದವರು

**ಬಾಲ್ಯ ವಿವಾಹ ಅಪರಾಧಕ್ಕೆ ನಿಗದಿಪಡಿಸಿದ ಶಿಕ್ಷೆ ಎರಡು ವರ್ಷಗಳವರೆಗೆ ಕಠಿಣ ಜೈಲುವಾಸ ಅಥವಾ 1 ಲಕ್ಷ ರೂ. ವರೆಗೆ ದಂಡ ಅಥವಾ ಎರಡೂ**

## ಬಾಲ್ಯ ವಿವಾಹ ಕಾಯ್ದೆಯಡಿ ಇರುವ ಅವಕಾಶಗಳು :

- ಮದುವೆ ಸಮಯದಲ್ಲಿ ನೀಡಲಾದ ಹಣ, ಒಡವೆ ಮತ್ತಿತರ ಮೌಲ್ಯದ ವಸ್ತುಗಳನ್ನು ಪರಸ್ಪರ ಹಿಂದಿರುಗಿಸುವುದು.
- ಹುಡುಗಿ ಮರು ಮದುವೆಯಾಗುವ ತನಕ ನಿರ್ವಹಣಾ ವೆಚ್ಚವನ್ನು ಗಂಡಿನ ಕಡೆಯವರು ಭರಿಸುವುದು.
- ಒಂದು ಪಕ್ಷ ಹೆಣ್ಣು ಮಕ್ಕಳು ಪ್ರಕರಣವನ್ನು ದಾಖಲಿಸಿದ್ದರೆ, ಮರು ಮದುವೆಯಾಗುವ ತನಕ ಆಕೆಯ ವಾಸ್ತವ್ಯದ ವ್ಯವಸ್ಥೆ ಕಲ್ಪಿಸುವುದು.
- ಬಾಲ್ಯ ವಿವಾಹಿತರಿಗೆ ಜನಿಸಿದ ಮಗು ನ್ಯಾಯಸಮ್ಮತ ಎಂದು ಎಲ್ಲಾ ಸಂದರ್ಭಗಳಲ್ಲೂ ಪರಿಗಣಿಸಲ್ಪಡುತ್ತದೆ.
- ಬಾಲ್ಯ ವಿವಾಹದಿಂದ ಜನಿಸುವ ಮಗುವಿನ ನಿರ್ವಹಣಾ ವೆಚ್ಚವನ್ನ ಗಂಡಿನ ಕಡೆಯವರು ನೀಡುವುದು.

## ಬಾಲ್ಯ ವಿವಾಹ ತಡೆಯುವ ಸಲುವಾಗಿ ಬಾಲ್ಯ ವಿವಾಹ ನಿಷೇಧಾಧಿಕಾರಿಗಳನ್ನು ಸರ್ಕಾರವು ನೇಮಿಸಿರುತ್ತದೆ.

## ಬಾಲ್ಯ ವಿವಾಹ ನಿಷೇಧಾಧಿಕಾರಿಗಳು.

- ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
- ಎಲ್ಲಾ ಜಿಲ್ಲಾಧಿಕಾರಿಗಳು
- ಎಲ್ಲಾ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
- ಎಲ್ಲಾ ನಿರೂಪಣಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
- ಎಲ್ಲಾ ತಹಶೀಲ್ದಾರರು, ಕಂದಾಯ ಇಲಾಖೆ
- ಎಲ್ಲಾ ಕಾರ್ಮಿಕ ಅಧಿಕಾರಿಗಳು, ಕಾರ್ಮಿಕ ಇಲಾಖೆ
- ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ
- ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
- ಎಲ್ಲಾ ಗ್ರಾಮಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಗ್ರಾಮೀಣ ಮತ್ತು ಪಂಚಾಯತ ಅಭಿವೃದ್ಧಿ ಇಲಾಖೆ
- ಎಲ್ಲಾ ಗ್ರಾಮ ಲೆಕ್ಕಿಗರು, ಕಂದಾಯ ಇಲಾಖೆ
- ಎಲ್ಲಾ ಕಂದಾಯ ಅಧಿಕಾರಿಗಳು, ನಗರ/ಪುರಸಭೆ

## ಬಾಲ್ಯ ವಿವಾಹ ನಿಷೇಧಾಧಿಕಾರಿಗಳು.

1. ರಾಜ್ಯ ಮಟ್ಟ : ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, 2ನೇ ಮಹಡಿ, ಬಹುಮಹಡಿಗಳ ಕಟ್ಟಡ, ಡಾ. ಬಿ. ಆರ್. ಅಂಬೇಡ್ಕರ್ ಬೀದಿ, ಬೆಂಗಳೂರು - 560 001 ದೂರವಾಣಿ ಸಂಖ್ಯೆ : 080 22252329, 222353776, 22355984, 22384138
2. ಜಿಲ್ಲಾ ಮಟ್ಟ : ಜಿಲ್ಲಾ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
3. ತಾಲೂಕು ಮಟ್ಟ : ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಸಮಗ್ರ ಶಿಶು ಅಭಿವೃದ್ಧಿ ಯೋಜನೆ.
4. ಬಾಲ್ಯ ವಿವಾಹ ನಿಷೇಧಾಧಿಕಾರಿಗಳು.

ಪ್ರಕಟಣೆ

**ಸ್ಪಂದನ ಸಂಸ್ಥೆ**

# 95, ಮೊದಲನೇ ಅಡ್ಡ ರಸ್ತೆ, ರುಕ್ಮಿಣಿ ನಗರ, ಬೆಳಗಾವಿ-590016 ಸಂಪರ್ಕಿಸಿ : 0831-2456293, ಮೊಬೈಲ್ ನಂ. - 9480189322